# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** M/s Solar Energy Corporation of India Ltd., ರವರಿಗೆ ಕೋಲಾರ ಜಿಲ್ಲೆಯ, ಕೋಲಾರ ತಾಲ್ಲೂಕಿನ ವೀರಾಪುರ ಮತ್ತು ಪೂವನದಹಳ್ಳಿ ಗ್ರಾಮದಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ಘಟಕದ ಅನುಷ್ಠಾನದ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ:ಇಎನ್ 133 ಎನ್‌ಸಿಇ 2018, ದಿ:09-03-2018

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ: ಕೆ.ಆರ್.ಇ.ಡಿ.ಎಲ್/07/SG/F-695/2019/4792, ದಿನಾಂಕ: 30.09.2019

* * *

3260 17/12/19 MD KREDL

18.12.19 GM (Tech) KREDL AGM-SG

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದ ಮೂಲಕ M/s Solar Energy Corporation of India Ltd., ರವರಿಗೆ ಕೋಲಾರ ಜಿಲ್ಲೆಯ, ಕೋಲಾರ ತಾಲ್ಲೂಕಿನ ವೀರಾಪುರ ಮತ್ತು ಪೂವನದಹಳ್ಳಿ ಗ್ರಾಮದಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕವನ್ನು ಸ್ವತಂತ್ರ ವಿದ್ಯುತ್ ಉತ್ಪಾದಕರ ವಿಭಾಗದಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿರುತ್ತದೆ.

ಸದರಿ ಯೋಜನೆಯ ನಿರಾಕ್ಷೇಪಣೆ ಆದೇಶದಲ್ಲಿನ ಕ್ರಮ ಸಂಖ್ಯೆ: (8) ರ ಷರತ್ತಿನಂತೆ ಪ್ರಸ್ತಾಪಿತ ಸೌರ ವಿದ್ಯುತ್ ಉತ್ಪಾದನಾ ಘಟಕದ ನಿರಾಕ್ಷೇಪಣೆ ಆದೇಶವನ್ನು ಹೊರಡಿಸಿದ ದಿನಾಂಕದಿಂದ 18 ತಿಂಗಳುಗಳೊಳಗಾಗಿ ಅನುಷ್ಠಾನಗೊಳಿಸಬೇಕಾಗಿರುತ್ತದೆ. ಆದರೆ, ಕಾರಣಾಂತರಗಳಿಂದ ಸದರಿ ಯೋಜನೆಯನ್ನು ನಿಗದಿತ ಅವಧಿಯೊಳಗಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗದಿರುವುದರಿಂದ ಯೋಜನೆಯ ಅನುಷ್ಠಾನದ ಅವಧಿಯನ್ನು ನಿಗದಿತ ಅವಧಿಯು ಮುಕ್ತಾಯಗೊಂಡ ದಿನಾಂಕದಿಂದ ಅನ್ವಯಿಸುವಂತೆ ಒಂದು ವರ್ಷದ ಅವಧಿಗೆ ವಿಸ್ತರಿಸುವಂತೆ M/s Solar Energy Corporation of India Ltd., ರವರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರಿಗೆ ಸಲ್ಲಿಸಿದ್ದ ಮನವಿಯ ಹಿನ್ನೆಲೆಯಲ್ಲಿ, ಸದರಿ ಅಭಿವೃದ್ಧಿದಾರರು ಯೋಜನಾ ಅನುಷ್ಠಾನದ ಅವಧಿಯ ವಿಸ್ತರಣೆಗೆ ನಿಯಮಾನುಸಾರ ಅನ್ವಯವಾಗುವ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಪಾವತಿಸಿರುವುದರಿಂದ ಹಾಗೂ ಯೋಜನೆಯ ಅನುಷ್ಠಾನಕ್ಕಾಗಿ ಸಲ್ಲಿಸಿದ್ದ ನೆರವೇರಿಕೆ ಬ್ಯಾಂಕ್ ಖಾತರಿಯನ್ನು ವಿಸ್ತರಿಸಿರುವುದರಿಂದ M/s Solar Energy Corporation of India Ltd., ರವರ ಕೋರಿಕೆಯನ್ನು ಪರಿಗಣಿಸಿ ಯೋಜನೆಯ ಅನುಷ್ಠಾನದ ಅವಧಿಯನ್ನು ಮುಕ್ತಾಯದ ದಿನಾಂಕದಿಂದ

...2

ಅನ್ವಯಿಸುವಂತೆ ಒಂದು ವರ್ಷದ ಅವಧಿಗೆ ದಿನಾಂಕ: 08.09.2019 ರಿಂದ ಅನ್ವಯಿಸುವಂತೆ ಒಂದು ವರ್ಷದ ಅವಧಿಗೆ ಅಂದರೆ ದಿನಾಂಕ: 07.09.2020 ರವರೆಗೆ ವಿಸ್ತರಿಸಿ ಸರ್ಕಾರದಿಂದ ಆದೇಶವನ್ನು ಹೊರಡಿಸುವಂತೆ ಶಿಫಾರಸ್ಸು ಮಾಡಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದ ಮೂಲಕ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ : ಎನರ್ಜಿ 254 ಎನ್‌ಸಿಇ 2019</u>**

**<u>ಬೆಂಗಳೂರು, ದಿನಾಂಕ: 09-12-2019</u>**

M/s Solar Energy Corporation of India Ltd., ರವರಿಗೆ ಕೋಲಾರ ಜಿಲ್ಲೆಯ, ಕೋಲಾರ ತಾಲ್ಲೂಕಿನ ವೀರಾಪುರ ಮತ್ತು ಪೂವನದಹಳ್ಳಿ ಗ್ರಾಮದಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಯೋಜನೆಯ ಅನುಷ್ಠಾನದ ಅವಧಿಯನ್ನು, ಸದರಿ ಅಭಿವೃದ್ಧಿದಾರರು ಯೋಜನೆಗೆ ಸಂಬಂಧಿಸಿದಂತೆ ಸಲ್ಲಿಸಬೇಕಾಗಿರುವ ಬ್ಯಾಂಕ್ ಗ್ಯಾರಂಟಿಯನ್ನು ದಿನಾಂಕ: 31.03.2020 ರವರೆಗೆ ವಿಸ್ತರಿಸಿರುವುದರಿಂದ ನಿಯಮಾನುಸಾರ ಅನ್ವಯವಾಗುವ ಶುಲ್ಕಗಳನ್ನು ಪಾವತಿಸುವ ಷರತ್ತಿಗೊಳಪಟ್ಟು ದಿನಾಂಕ: 08.09.2019 ರಿಂದ ಅನ್ವಯಿಸುವಂತೆ ಒಂದು ವರ್ಷದ ಅವಧಿಗೆ ಅಂದರೆ ದಿನಾಂಕ: 07.09.2020 ರವರೆಗೆ ಮಾತ್ರ ವಿಸ್ತರಿಸಿ ಆದೇಶಿಸಿದೆ.

ವಿಸ್ತರಿತ ಅವಧಿಯೊಳಗಾಗಿ M/s Solar Energy Corporation of India Ltd., .ರವರು ಕೋಲಾರ ಜಿಲ್ಲೆಯ, ಕೋಲಾರ ತಾಲ್ಲೂಕಿನ ವೀರಾಪುರ ಮತ್ತು ಪೂವನದಹಳ್ಳಿ ಗ್ರಾಮದಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ. ಯೋಜನೆಯನ್ನು ಸಂಪೂರ್ಣವಾಗಿ ಅನುಷ್ಠಾನ ಗೊಳಿಸತಕ್ಕದ್ದು, ಈ ಅವಧಿಯಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸದೇ ಇದ್ದಲ್ಲಿ, ಯೋಜನೆಯು ರದ್ದಾಗುವುದು, ಮುಂದುವರೆದ ವಿಸ್ತರಣಾ ಅವಧಿಯನ್ನು ನೀಡಲಾಗುವುದಿಲ್ಲ.

ಸರ್ಕಾರದ ಆದೇಶ ಸಂಖ್ಯೆ: ಇಎನ್ 133 ಎನ್‌ಸಿಇ 2018, ದಿನಾಂಕ: 09-03-2018 ರಲ್ಲಿನ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

...3

ಈ ಆದೇಶವನ್ನು ರದ್ದು ಮಾಡುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

N. Mangalagowri
(ಎನ್.ಮಂಗಳಗೌರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ/ ಕಂದಾಯ ಇಲಾಖೆ/ಬಹುಮಹಡಿ ಕಟ್ಟಡ/ವಿಕಾಸ ಸೌಧ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
6. ಜಿಲ್ಲಾಧಿಕಾರಿಗಳು, ಕೋಲಾರ ಜಿಲ್ಲೆ, ಕೋಲಾರ.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ಕೋಲಾರ ಜಿಲ್ಲೆ, ಕೋಲಾರ.
8. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
9. M/s Solar Energy Corporation of India Ltd., 1st Floor, D-3, A Wing, Prius Building, District Centre, Saket, New Delhi-110017.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.